# ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ

**ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಕರ್ನಾಟಕ ಸರ್ಕಾರ**

**'ವಿಜ್ಞಾನ ಭವನ' 24/2, 21ನೇ ಮುಖ್ಯ ರಸ್ತೆ, ಬನಶಂಕರಿ, 2ನೇ ಹಂತ, ಬೆಂಗಳೂರು**

**ಜಾಲತಾಣ : www.kstacademy.org**

ಕರ್ನಾಟಕ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಅಂಗಸಂಸ್ಥೆಯಾದ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯು (ಕವಿತಂಅ) ಪ್ರಸಿದ್ಧ ಬಾಹ್ಯಾಕಾಶ ವಿಜ್ಞಾನಿ ಪ್ರೊ. ಯು. ಆರ್. ರಾವ್, ನಿವೃತ್ತ ಅಧ್ಯಕ್ಷರು, ಇಸ್ರೋ/ಕಾರ್ಯದರ್ಶಿ, ಬಾಹ್ಯಾಕಾಶ ಇಲಾಖೆ, ಭಾರತ ಸರ್ಕಾರ ಇವರ ಅಧ್ಯಕ್ಷತೆಯಲ್ಲಿ 2005ರ ಜುಲೈನಿಂದ ಕಾರ್ಯನಿರ್ವಹಿಸುತ್ತಿದೆ. ಮೂಲ ವಿಜ್ಞಾನವನ್ನು ವಿವಿಧ ಶೈಕ್ಷಣಿಕ ಹಂತಗಳಲ್ಲಿ ಸದೃಢಗೊಳಿಸುವ, ವೈಜ್ಞಾನಿಕ ಅರಿವನ್ನು ಮೂಡಿಸುವ ಮತ್ತು ವಿಜ್ಞಾನವನ್ನು ಜನಸಾಮಾನ್ಯರಲ್ಲಿ ಜನಪ್ರಿಯಗೊಳಿಸುವ ಉದ್ದೇಶದಿಂದ ರಾಜ್ಯಾದ್ಯಂತ ಹಲವಾರು ಕಾರ್ಯಕ್ರಮಗಳನ್ನು ಅಕಾಡೆಮಿಯು ಯಶಸ್ವಿಯಾಗಿ ಅನುಷ್ಠಾನಗೊಳಿಸುತ್ತಿದ್ದು, 2016–'17ನೇ ಸಾಲಿನಲ್ಲಿ ಆಯೋಜಿಸಲಾದ ಪ್ರಮುಖ ಕಾರ್ಯಕ್ರಮಗಳ ವಿವರ ಕೆಳಕಂಡಂತಿದೆ:

**1. ವಿಜ್ಞಾನ ಲೋಕ ಪ್ರಕಟಣೆ**

ವಿಜ್ಞಾನ ಲೋಕ ಎಂಬ ದ್ವೈಮಾಸಿಕ ಸಂಚಿಕೆಯನ್ನು ಅಕಾಡೆಮಿಯು 2007ರಿಂದ ನಿರಂತರವಾಗಿ ಪ್ರಕಟಿಸುತ್ತಿದೆ. 2016–'17ನೇ ಸಾಲಿನಲ್ಲಿ ಸದರಿ ದ್ವೈಮಾಸಿಕದ 6 ಸಂಚಿಕೆಗಳನ್ನು 2016ರ ಮೇ, ಜುಲೈ, ಸೆಪ್ಟೆಂಬರ್ & ನವೆಂಬರ್ ಹಾಗೂ 2017ರ ಜನವರಿ & ಮಾರ್ಚ್ ಮಾಹೆಗಳಲ್ಲಿ ಪ್ರಕಟಿಸಲಾಗಿದೆ. ಪ್ರತಿ ಸಂಚಿಕೆಯ ತಲಾ 2000 ಪ್ರತಿಗಳನ್ನು ಮುದ್ರಿಸಿ, ರಾಜ್ಯದ ವಿವಿಧ ವಿಜ್ಞಾನ ಪದವಿ ಪೂರ್ವ ಮತ್ತು ವಿಜ್ಞಾನ ಪದವಿ ಕಾಲೇಜುಗಳಿಗೆ, ವಿಜ್ಞಾನ ಕೇಂದ್ರಗಳಿಗೆ, ಗ್ರಂಥಾಲಯಗಳಿಗೆ ಹಾಗೂ ಇನ್ನಿತರೆ ಸಂಘ ಸಂಸ್ಥೆಗಳಿಗೆ ಉಚಿತವಾಗಿ ವಿತರಿಸಲಾಗುತ್ತಿದೆ.




ಚಿತ್ರ 1: ವಿಜ್ಞಾನ ಲೋಕ ದ್ವೈಮಾಸಿಕದ ಸಂಚಿಕೆಗಳು

**2. ವಿಜ್ಞಾನ ಪದವಿ ವಿದ್ಯಾರ್ಥಿಗಳಿಗೆ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ಶಿಷ್ಯವೇತನ**

**2.1 ಅಕಾಡೆಮಿ ಶಿಷ್ಯವೇತನ**

ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ಶಿಷ್ಯವೇತನವನ್ನು 2006–'07 ನೇ ಸಾಲಿನಿಂದ ಮೂಲ ವಿಜ್ಞಾನ ಪದವಿ ವ್ಯಾಸಂಗಕ್ಕೆ ಪ್ರವೇಶ ಪಡೆದಿರುವ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಿ ನೀಡಲಾಗುತ್ತಿದೆ. ಕಾಲೇಜು ಶಿಕ್ಷಣ ಇಲಾಖೆಯು ಇದೇ ರೀತಿಯಾದ ಶಿಷ್ಯವೇತನವನ್ನು ನೀಡುತ್ತಿದ್ದು, ಪುನರಾವರ್ತನೆಯಾಗುವುದನ್ನು ತಡೆಯಲು ಅಕಾಡೆಮಿಯಿಂದ ವಿಜ್ಞಾನ ಪದವಿ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ ಶಿಷ್ಯವೇತನವನ್ನು 2014–'15ನೇ ಸಾಲಿನಿಂದ ನಿಲ್ಲಿಸಲಾಗಿರುತ್ತದೆ. ಆದರೆ, ದ್ವಿತೀಯ ಮತ್ತು ತೃತೀಯ ವರ್ಷದ ವಿದ್ಯಾರ್ಥಿಗಳಿಗೆ ಮಾತ್ರ ಶಿಷ್ಯವೇತನವನ್ನು

ಮುಂದುವರಿಸಲಾಗಿದೆ. 2016-'17ನೇ ಸಾಲಿನಲ್ಲಿ ದ್ವಿತೀಯ ಮತ್ತು ತೃತೀಯ ವರ್ಷದ ವಿದ್ಯಾರ್ಥಿಗಳಿಗೆ ಮಾಹೆಯಾನ ರೂ. 1000/- ಗಳಂತೆ ಒಟ್ಟು 10 ತಿಂಗಳ ಅವಧಿಗೆ ರೂ. 10,000/- ಗಳಂತೆ ಶಿಷ್ಯವೇತನವನ್ನು ಬೆಂಗಳೂರು ವಿಶ್ವವಿದ್ಯಾಲಯ; ಕುವೆಂಪು ವಿಶ್ವವಿದ್ಯಾಲಯ, ಶಿವಮೊಗ್ಗ; ಮಂಗಳೂರು ವಿಶ್ವವಿದ್ಯಾಲಯ; ಮೈಸೂರು ವಿಶ್ವವಿದ್ಯಾಲಯ; ಗುಲ್ಬರ್ಗಾ ವಿಶ್ವವಿದ್ಯಾಲಯ, ಕಲಬುರ್ಗಿ; ಶ್ರೀ ವಿಜಯನಗರ ಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ; ತುಮಕೂರು ವಿಶ್ವವಿದ್ಯಾಲಯ; ದಾವಣಗೆರೆ ವಿಶ್ವವಿದ್ಯಾಲಯ; ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ; ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ; ಕರ್ನಾಟಕ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ; ಜೈನ್ ವಿಶ್ವವಿದ್ಯಾಲಯ, ಬೆಂಗಳೂರು; ಮಣಿಪಾಲ್ ವಿಶ್ವವಿದ್ಯಾಲಯ, ಮಣಿಪಾಲ್ ಹಾಗೂ ಕ್ರೈಸ್ಟ್ ವಿಶ್ವವಿದ್ಯಾಲಯ, ಬೆಂಗಳೂರು ಇವುಗಳ ವ್ಯಾಪ್ತಿಯಲ್ಲಿ ಬರುವ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಒಟ್ಟು 318 ವಿಜ್ಞಾನ ಪದವಿ ವಿದ್ಯಾರ್ಥಿಗಳಿಗೆ ನೀಡಲಾಗಿದೆ (ದ್ವಿತೀಯ ವರ್ಷ – 157 & ತೃತೀಯ ವರ್ಷ – 161).

### 2.2 ವಿಶೇಷ ಅಭಿವೃದ್ಧಿ ಯೋಜನೆಯಡಿ (SDP) ಶಿಷ್ಯವೇತನ

ಪ್ರಾದೇಶಿಕ ಅಸಮತೋಲನಕ್ಕೆ ಸಂಬಂಧಿಸಿದ ಡಾ. ಡಿ. ಎಂ. ನಂಜುಂಡಪ್ಪ ಸಮಿತಿಯು ಗುರುತಿಸಿರುವ ಹಿಂದುಳಿದ ತಾಲ್ಲೂಕುಗಳಲ್ಲಿ ವಿಜ್ಞಾನ ಪದವಿಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡಲು ಶಿಷ್ಯವೇತನವನ್ನು ಮಾಹೆಯಾನ ರೂ. 1000/- ರಂತೆ (10 ತಿಂಗಳವರೆಗೆ ರೂ. 10,000/- ಪ್ರತಿ ವಿದ್ಯಾರ್ಥಿಗೆ) ಕಲಬುರ್ಗಿ (218 ಶಿಷ್ಯವೇತನಗಳು); ಬೆಳಗಾವಿ (174 ಶಿಷ್ಯವೇತನಗಳು); ಬೆಂಗಳೂರು (218 ಶಿಷ್ಯವೇತನಗಳು) ಹಾಗೂ ಮೈಸೂರು (200 ಶಿಷ್ಯವೇತನಗಳು) ಜಿಲ್ಲೆಗಳ ಒಟ್ಟು 810 ವಿದ್ಯಾರ್ಥಿಗಳಿಗೆ ನೀಡಲಾಗಿದೆ.

## 3. ಸ್ನಾತಕೋತ್ತರ ವಿಜ್ಞಾನ ವಿದ್ಯಾರ್ಥಿಗಳಿಗೆ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ಶಿಷ್ಯವೇತನ

ಸ್ನಾತಕೋತ್ತರ ಶಿಷ್ಯವೇತನವನ್ನು ಪ್ರತಿಭಾವಂತ ವಿದ್ಯಾರ್ಥಿಗಳು ಮೂಲ ವಿಜ್ಞಾನ ವಿಷಯದಲ್ಲಿ ಪದವಿಯ ನಂತರ ವ್ಯಾಸಂಗವನ್ನು ಮುಂದುವರೆಸಲು ಉತ್ತೇಜಿಸಲು ನೀಡಲಾಗುತ್ತಿದೆ. ವಿಜ್ಞಾನ ವಿದ್ಯಾರ್ಥಿಗಳಿಗೆ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ಶಿಷ್ಯವೇತನವನ್ನು ಮಾಹೆಯಾನ ರೂ. 1500/- ಗಳಂತೆ (10 ತಿಂಗಳವರೆಗೆ ರೂ. 15,000/-) ಒಂದು ವಿಶ್ವವಿದ್ಯಾನಿಲಯಕ್ಕೆ 05 ಶಿಷ್ಯವೇತನವನ್ನು ಪ್ರತಿ ಮೂಲ ವಿಜ್ಞಾನ ವಿಭಾಗಕ್ಕೆ ಒಂದರಂತೆ ಸ್ನಾತಕೋತ್ತರ ಪದವಿಯ ಎರಡು ವರ್ಷಗಳ ಅವಧಿಯವರೆಗೆ ನೀಡಲಾಗುತ್ತಿದೆ. ಬೆಂಗಳೂರು ವಿಶ್ವವಿದ್ಯಾಲಯ; ಕ್ರೈಸ್ಟ್ ವಿಶ್ವವಿದ್ಯಾಲಯ; ದಾವಣಗೆರೆ ವಿಶ್ವವಿದ್ಯಾಲಯ; ಗುಲ್ಬರ್ಗಾ ವಿಶ್ವವಿದ್ಯಾಲಯ; ಕರ್ನಾಟಕ ವಿಶ್ವವಿದ್ಯಾಲಯ; ಮೈಸೂರು ವಿಶ್ವವಿದ್ಯಾಲಯ; ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯ; ಕುವೆಂಪು ವಿಶ್ವವಿದ್ಯಾಲಯ; ಮಂಗಳೂರು ವಿಶ್ವವಿದ್ಯಾಲಯ; ಮಣಿಪಾಲ್ ವಿಶ್ವವಿದ್ಯಾಲಯ; ತುಮಕೂರು ವಿಶ್ವವಿದ್ಯಾಲಯ; ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ; ಜೈನ್ ವಿಶ್ವವಿದ್ಯಾಲಯ ಮತ್ತು ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯಗಳ ಒಟ್ಟು 102 ಸ್ನಾತಕೋತ್ತರ ವಿದ್ಯಾರ್ಥಿಗಳು ಶಿಷ್ಯವೇತನವನ್ನು ಪಡೆದಿದ್ದಾರೆ.

## 4. ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ಸಮ್ಮೇಳನಗಳು

### 4.1 ಅಕಾಡೆಮಿಯ ಪ್ರಧಾನ ಸಮ್ಮೇಳನ

ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ ಒಂಬತ್ತನೇ ವಾರ್ಷಿಕ ಸಮ್ಮೇಳನವನ್ನು "**ಇಪ್ಪತ್ತೊಂದನೇ ಶತಮಾನದಲ್ಲಿ ವಿಜ್ಞಾನ, ತಂತ್ರಜ್ಞಾನ ಮತ್ತು ಆವಿಷ್ಕಾರಗಳು** ("Science, Technology and Innovations in the 21st Century") ಎಂಬ ಕೇಂದ್ರ ವಿಷಯದಡಿ, ಬೆಂಗಳೂರಿನ **ಕ್ರೈಸ್ಟ್ ವಿಶ್ವವಿದ್ಯಾಲಯದ** (Christ University) ಸಹಯೋಗದೊಂದಿಗೆ ಎರಡು ದಿನಗಳ ಕಾಲ 2016ರ ಡಿಸೆಂಬರ್ 20 ಮತ್ತು 21 ರಂದು ಬಹಳ ಯಶಸ್ವಿಯಾಗಿ ಆಯೋಜಿಸಲಾಯಿತು.

ಈ ಸಮ್ಮೇಳನವನ್ನು ದಿನಾಂಕ 20ನೇ ಡಿಸೆಂಬರ್ 2016 ರಂದು ಬೆಳಗ್ಗೆ ಕ್ರೈಸ್ಟ್ ವಿಶ್ವವಿದ್ಯಾಲಯದ ಆವರಣದಲ್ಲಿರುವ ಆಡಿಟೋರಿಯಂನಲ್ಲಿ ರಾಜ್ಯದ ಸನ್ಮಾನ್ಯ ಮುಖ್ಯಮಂತ್ರಿಗಳಾದ **ಶ್ರೀ ಸಿದ್ಧರಾಮಯ್ಯ** ಅವರು ಉದ್ಘಾಟಸಿ, ಚಾಲನೆ ನೀಡಿದರು. ಉದ್ಘಾಟನಾ ಸಮಾರಂಭದಲ್ಲಿ ಮಾನ್ಯ ಯೋಜನೆ, ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ **ಶ್ರೀ ಎಂ ಆರ್ ಸೀತಾರಾಂ** ಅವರು ಹಾಗೂ ಮಾನ್ಯ ಬೆಂಗಳೂರು ನಗರಾಭಿವೃದ್ಧಿ ಮತ್ತು ನಗರ ಯೋಜನೆ ಹಾಗೂ ಬೆಂಗಳೂರು ನಗರ ಜಿಲ್ಲಾ ಉಸ್ತುವಾರಿ ಸಚಿವರಾದ **ಶ್ರೀ ಕೆ ಜೆ ಜಾರ್ಜ್** ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು. ಅಕಾಡೆಮಿಯ ಅಧ್ಯಕ್ಷರು ಹಾಗೂ ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆಯ (ಇಸ್ರೋ) ನಿವೃತ್ತ ಅಧ್ಯಕ್ಷರಾದ **ಪ್ರೊ. ಯು ಆರ್ ರಾವ್** ಅವರು ಪ್ರಧಾನ ಭಾಷಣ ಮಾಡಿದರು. ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಾದ **ಶ್ರೀಮತಿ ವಿ ಮಂಜುಲ** ಅವರು ಗೌರವಾನ್ವಿತ ಅತಿಥಿಗಳಾಗಿ ಭಾಗವಹಿಸಿದ್ದರು. ಸಮಾರಂಭದ ಅಧ್ಯಕ್ಷತೆಯನ್ನು ಕ್ರೈಸ್ಟ್ ವಿಶ್ವವಿದ್ಯಾಲಯ ಕುಲಪತಿಗಳಾದ **ಡಾ ಫಾ ಥಾಮಸ್ ಸಿ ಮ್ಯಾಥ್ಯೂ ಕುಲಪತಿಗಳು, ಕ್ರೈಸ್ಟ್ ವಿಶ್ವವಿದ್ಯಾಲಯ, ಬೆಂಗಳೂರು** ಅವರು ವಹಿಸಿದ್ದರು. **ಡಾ. ಹೆಚ್. ಹೊನ್ನೇಗೌಡ**, ವಿಶೇಷ ನಿರ್ದೇಶಕರು (ತಾಂತ್ರಿಕ), ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ/ಸದಸ್ಯ ಕಾರ್ಯದರ್ಶಿ, ಕವಿತಂಅ ಇವರು ಕಾರ್ಯಕ್ರಮದ ಪರಿಚಯವನ್ನು ಮಾಡಿಕೊಟ್ಟು ಅತಿಥಿಗಳನ್ನು ಸ್ವಾಗತಿಸಿದರೆ, ವಿಶ್ವವಿದ್ಯಾಲಯದ ಕುಲಸಚಿವರಾದ **ಡಾ. ಅನಿಲ್ ಜೋಸೆಫ್ ಪಿಂಟೋ** ವಂದಿಸಿದರು.









ಚಿತ್ರ 2 & 3: ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ ಒಂಬತ್ತನೇ ಸಮ್ಮೇಳನವನ್ನು ಸನ್ಮಾನ್ಯ ಮುಖ್ಯಮಂತ್ರಿಗಳು ಉದ್ಘಾಟಿಸುತ್ತಿರುವುದು ಹಾಗೂ ಸಂಶೋಧನಾ ಪ್ರಾತ್ಯಕ್ಷಿಗಳ ಸಾರಾಂಶ ಕೈಪಿಡಿಯ ಬಿಡುಗಡೆ

ಈ ಸಮ್ಮೇಳನದ ಉದ್ಘಾಟನಾ ಸಮಾರಂಭದಲ್ಲಿ ದೇಶದ ಬಾಹ್ಯಾಕಾಶ ಸಂಶೋಧನಾ ಕ್ಷೇತ್ರಕ್ಕೆ ಅನನ್ಯ ಕೊಡುಗೆಯನ್ನು ನೀಡಿರುವ ಖ್ಯಾತ ಬಾಹ್ಯಾಕಾಶ ವಿಜ್ಞಾನಿ ಹಾಗೂ ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆಯ ಅಧ್ಯಕ್ಷರಾದ **ಪದ್ಮಶ್ರೀ ಶ್ರೀ ಎ ಎಸ್ ಕಿರಣ್ ಕುಮಾರ್** ಅವರಿಗೆ "**ಅಕಾಡೆಮಿ ಜೀವಮಾನ ಸಾಧನೆ**" ಪ್ರಶಸ್ತಿಯನ್ನು ನೀಡಿ ಪುರಸ್ಕರಿಸಲಾಯಿತು. ಸನ್ಮಾನಿತರಿಗೆ ರೂ. 1.00 ಲಕ್ಷಗಳ ನಗದು, ಚಿನ್ನದ ಪದಕ ಹಾಗೂ ಸನ್ಮಾನ ಪತ್ರಗಳನ್ನು ನೀಡಿ ಗೌರವಿಸಲಾಯಿತು.




ಚಿತ್ರ 4: ಅಕಾಡೆಮಿಯ ಜೀವಮಾನ ಸಾಧನೆ ಪ್ರಶಸ್ತಿಯನ್ನು ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆಯ ಅಧ್ಯಕ್ಷರಾದ ಶ್ರೀ ಎ. ಎಸ್. ಕಿರಣ್ ಕುಮಾರ್‌ರವರಿಗೆ ನೀಡಿ ಗೌರವಿಸುತ್ತಿರುವುದು

ಸಮ್ಮೇಳನದ ತಾಂತ್ರಿಕ ಅಧಿವೇಶನದಲ್ಲಿ ಖ್ಯಾತ ವಿಜ್ಞಾನಿಗಳು ಮತ್ತು ಸಂಶೋಧಕರಿಂದ ಹತ್ತು ಶ್ರೇಷ್ಠ ಉಪನ್ಯಾಸಗಳನ್ನು ಏರ್ಪಡಿಸಲಾಗಿತ್ತು. ವಿಶ್ವವಿದ್ಯಾಲಯಗಳ ಮತ್ತು ಕಾಲೇಜುಗಳ ಪ್ರಾಧ್ಯಾಪಕರು, ಪದವಿ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳು, ವಿಜ್ಞಾನ ಬರಹಗಾರರು, ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸರ್ಕಾರದ ಸ್ವಾಯತ್ತ ಸಂಸ್ಥೆಗಳ ಪ್ರತಿನಿಧಿಗಳು ಸೇರಿದಂತೆ, ಒಂದು ಸಾವಿರಕ್ಕೂ ಹೆಚ್ಚು ಪ್ರತಿನಿಧಿಗಳು ಸಮ್ಮೇಳನದಲ್ಲಿ ಭಾಗವಹಿಸಿದ್ದರು.

ಅಲ್ಲದೆ, ಮೂಲ ಮತ್ತು ಅನ್ವಯಿಕ ವಿಜ್ಞಾನ ಮತ್ತು ತಂತ್ರಜ್ಞಾನಗಳಿಗೆ ಸಂಬಂಧಿಸಿದ 200ಕ್ಕೂ ಹೆಚ್ಚು ಸಂಶೋಧನಾ ಪ್ರಾತ್ಯಕ್ಷಿಕೆಗಳನ್ನು (Poster Presentation) ರಾಜ್ಯದ ವಿವಿಧೆಡೆಗಳಿಂದ ಬಂದ ಸ್ನಾತಕೋತ್ತರ/ಸಂಶೋಧನಾ ವಿದ್ಯಾರ್ಥಿಗಳು, ಪ್ರಾಧ್ಯಾಪಕರು ಮತ್ತು ವಿಜ್ಞಾನಿಗಳು ಪ್ರಾತ್ಯಕ್ಷಿಕೆಗಳ ಪ್ರದರ್ಶನದಲ್ಲಿ ಮಂಡಿಸಿದರು. ಈ ಪ್ರಾತ್ಯಕ್ಷಿಕೆಗಳನ್ನು ತಜ್ಞ ಸಮಿತಿಯು ಮೌಲ್ಯಮಾಪನ ಮಾಡಿ, ಭೌತ & ಗಣಿತ ವಿಜ್ಞಾನ; ರಸಾಯನ & ಜೀವ ವಿಜ್ಞಾನ; ಅಂತರ್ ಶಾಸ್ತ್ರೀಯ ವಿಜ್ಞಾನ ಹಾಗೂ ಇಂಜಿನಿಯರಿಂಗ್ ವಿಜ್ಞಾನಗಳಿಗೆ ಸಂಬಂಧಿಸಿದ ಅತ್ಯುತ್ತಮವಾದ ಪ್ರಾತ್ಯಕ್ಷಿಕೆಗಳನ್ನು ನಗದು ಬಹುಮಾನಕ್ಕೆ ಆಯ್ಕೆ ಮಾಡಿತು. ಪ್ರತಿ ವಿಷಯದಲ್ಲೂ ಎರಡು ಬಹುಮಾನಗಳನ್ನು ನೀಡಲಾಯಿತು (ಮೊದಲನೇ ಬಹುಮಾನ ರೂ. 10,000/- ಹಾಗೂ ಎರಡನೇ ಬಹುಮಾನ ರೂ. 7,500/-ಗಳು).

### 4.2 ಬಳ್ಳಾರಿಯಲ್ಲಿ ವಿಶೇಷ ಅಭಿವೃದ್ಧಿ ಯೋಜನೆಯಡಿ ಅಕಾಡೆಮಿ ಸಮ್ಮೇಳನ

ಪ್ರಸಕ್ತ ಆರ್ಥಿಕ ವರ್ಷದಲ್ಲಿ ಅಕಾಡೆಮಿಯ ಎರಡನೇ ಸಮ್ಮೇಳನವನ್ನು "**ಸಮಾಜ ಮತ್ತು ಆರ್ಥಿಕತೆ ಮೇಲೆ ವಿಜ್ಞಾನ ಮತ್ತು ತಂತ್ರಜ್ಞಾನದ ಪರಿಣಾಮಗಳು**" ಎಂಬ ವಿಷಯದ ಮೇಲೆ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಸಹಯೋಗದೊಂದಿಗೆ ಎರಡು ದಿನಗಳ ಕಾಲ 2017 ಮಾರ್ಚ್ 8 ಮತ್ತು 9 ರಂದು (ಗುರುವಾರ ಮತ್ತು ಶುಕ್ರವಾರ) ಡಾ|| ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಯಶಸ್ವಿಯಾಗಿ ಆಯೋಜಿಸಲಾಯಿತು. ಈ ಸಮ್ಮೇಳನವನ್ನು ಹಿರಿಯ ರಾಜಕಾರಣಿ ಹಾಗೂ ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೆ. ಸಿ. ಕೊಂಡಯ್ಯ ಅವರು ಉದ್ಘಾಟಿಸಿದರು. ಅಕಾಡೆಮಿಯ ಮಾನ್ಯ ಸದಸ್ಯರು ಮತ್ತು ಮಂಗಳೂರು ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿಗಳಾದ ಪ್ರೊ. ಕೆ. ಎಂ. ಕಾವೇರಿಯಪ್ಪ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದು, ಸಮಾರಂಭದ ಅಧ್ಯಕ್ಷತೆಯನ್ನು ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ಎಮ್. ಎಸ್. ಸುಭಾಷ್ ಅವರು ವಹಿಸಿದ್ದರು. ಮೌಲ್ಯಮಾಪನ ಕುಲಸಚಿವರಾದ ಡಾ|| ಎಸ್. ಎ. ಪಾಟೀಲ್ ಅವರು ಅತಿಥಿಗಳನ್ನು ಸ್ವಾಗತಿಸಿ, ಕುಲಸಚಿವರಾದ ಡಾ|| ಟಿ. ಎಂ. ಭಾಸ್ಕರ್ ಅವರು ವಂದಿಸಿದರು. ಸಮಾರಂಭದಲ್ಲಿ ಅಕಾಡೆಮಿಯ ಹಿರಿಯ ವೈಜ್ಞಾನಿಕಾಧಿಕಾರಿ ಡಾ|| ಎ. ಎಂ. ರಮೇಶ್ ಹಾಗೂ ಸಮ್ಮೇಳನ ಸಂಯೋಜಕರಾದ ಡಾ|| ಕೆ. ಎಂ. ಲೋಕೇಶ್‌ರವರು ಉಪಸ್ಥಿತರಿದ್ದರು.



ಚಿತ್ರ 5: ಅಕಾಡೆಮಿಯ ಸಮ್ಮೇಳನವನ್ನು ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಕೆ. ಸಿ. ಕೊಂಡಯ್ಯ ಅವರು ಉದ್ಘಾಟಿಸುತ್ತಿರುವುದು.

ಈ ಸಮ್ಮೇಳನದಲ್ಲಿ ಪದವಿ ಮತ್ತು ಸ್ನಾತಕೋತ್ತರ ವಿಜ್ಞಾನ ವಿದ್ಯಾರ್ಥಿಗಳು, ವಿಜ್ಞಾನ ಶಿಕ್ಷಕರು, ಉಪನ್ಯಾಸಕರು, ಅಧ್ಯಾಪಕರು ಹಾಗೂ ಸರ್ಕಾರದ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ವಿಜ್ಞಾನಾಸ್ತಕರು ಸೇರಿದಂತೆ ೮೦೦ಕ್ಕೂ ಹೆಚ್ಚು ಪ್ರತಿನಿಧಿಗಳು ಭಾಗವಹಿಸಿದ್ದರು.

ಮೂಲ ಮತ್ತು ಅನ್ವಯಿಕ ವಿಜ್ಞಾನ ಮತ್ತು ತಂತ್ರಜ್ಞಾನಕ್ಕೆ ಸಂಬಂಧಿಸಿದ ಸಂಶೋಧನಾ ಪ್ರಾತ್ಯಕ್ಷಿಕೆಗಳನ್ನು (Poster Presentation) ಮಂಡಿಸಲು ಸಂಶೋಧಕರಿಗೆ ಅವಕಾಶವನ್ನು ಕಲ್ಪಿಸಲಾಗಿತ್ತು. ರಸಾಯನ & ಜೀವ ವಿಜ್ಞಾನ; ಭೌತ ಮತ್ತು ಗಣಿತ ವಿಜ್ಞಾನ; ಅಂತರ ಶಾಸ್ತ್ರಿಯ ವಿಜ್ಞಾನ ಹಾಗೂ ಇಂಜಿನಿಯರಿಂಗ್ ವಿಷಯಗಳಲ್ಲಿ ತಜ್ಞ ಸಮಿತಿಯು ಆಯ್ಕೆ ಮಾಡಿದ ಪ್ರತಿ ವಿಷಯದ ಅತ್ಯುತ್ತಮವಾದ ಪ್ರಾತ್ಯಕ್ಷಿಕೆಗಳಿಗೆ ಪ್ರಥಮ (ರೂ. 7,500/-) ಹಾಗೂ ದ್ವಿತೀಯ (ರೂ. 5,000/-) ಬಹುಮಾನಗಳನ್ನು ನೀಡಲಾಯಿತು.

ಸಮ್ಮೇಳನದ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಅಕಾಡೆಮಿಯ ಮಾನ್ಯ ಸದಸ್ಯರಾದ **ಡಾ|| ಪಿ ಎಸ್ ಶಂಕರ್** ಅವರು ಭಾಗವಹಿಸಿದ್ದು, ಅಧ್ಯಕ್ಷತೆಯನ್ನು ವಿಶ್ವವಿದ್ಯಾಲಯದ

ಕುಲಪತಿಗಳಾದ **ಪ್ರೊ. ಎಂ ಎಸ್ ಸುಭಾಷ್** ಅವರು ವಹಿಸಿದ್ದರು. ಅತಿಥಿಗಳನ್ನು ವಿಶ್ವವಿದ್ಯಾಲಯದ ವಿಜ್ಞಾನ ವಿಭಾಗದ ಡೀನ್ ಆದ **ಪ್ರೊ. ಕೆ ಹೆಚ್ ಶಿವಪ್ರಸಾದ್** ಅವರು ಸ್ವಾಗತಿಸಿ, ಅಕಾಡೆಮಿಯ ವೈಜ್ಞಾನಿಕಾಧಿಕಾರಿ **ಶ್ರೀ ವಿ ಕೆ ಶ್ರೀನಿವಾಸು** ವಂದಿಸಿದರು.

## 5. ವಿಜ್ಞಾನ ಪದವಿ & ಇಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ಮುಕ್ತ ಉಪನ್ಯಾಸ ಮಾಲೆ ಕಾರ್ಯಕ್ರಮ

ಮೂಲ ವಿಜ್ಞಾನ ಪದವಿ ವಿದ್ಯಾರ್ಥಿಗಳಿಗೆ ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರಗಳ ಹೊಸ ಆಯಾಮಗಳಲ್ಲಿ ಉನ್ನತ ಶಿಕ್ಷಣ ಮತ್ತು ಸಂಶೋಧನೆಯನ್ನು ಕೈಗೊಳ್ಳಲು ಆಸಕ್ತಿ ಬೆಳೆಸಿ, ಉತ್ತೇಜಿಸಲು ರಾಜ್ಯದ ಖ್ಯಾತ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆಗಳ ಶ್ರೇಷ್ಠ ವಿಜ್ಞಾನಿಗಳು ಮತ್ತು ಹೆಸರಾಂತ ತಜ್ಞರನ್ನು ಆಹ್ವಾನಿಸಿ ಉಪನ್ಯಾಸಗಳನ್ನು ಏರ್ಪಡಿಸಲಾಯಿತು. ಒಟ್ಟು 7 ಮುಕ್ತ ಉಪನ್ಯಾಸ ಮಾಲೆ ಕಾರ್ಯಕ್ರಮಗಳನ್ನು ಪ್ರತಿ ಕಾರ್ಯಕ್ರಮಕ್ಕೆ ರೂ. 50,000 ಗಳ ವೆಚ್ಚದಲ್ಲಿ ರಾಜ್ಯದ ವಿವಿಧೆಡೆ ವಿಜ್ಞಾನ ಪದವಿ ಮತ್ತು ಇಂಜಿನಿಯರಿಂಗ್ ಕಾಲೇಜುಗಳ ಸಹಯೋಗದೊಂದಿಗೆ ಕೆಳಕಂಡ ಸ್ಥಳಗಳಲ್ಲಿ ಯಶಸ್ವಿಯಾಗಿ ಆಯೋಜಿಸಲಾಗಿದೆ:

| ಕ್ರ. ಸಂ. | ಶೈಕ್ಷಣಿಕ ಸಂಸ್ಥೆ & ಸ್ಥಳ | ದಿನಾಂಕ |
|---|---|---|
| 1 | ಎಂ ಇ ಎಸ್ ಪ್ರಥಮ ದರ್ಜೆ ಕಾಲೇಜು, ಮಲ್ಲೇಶ್ವರಂ, ಬೆಂಗಳೂರು | 19 ಸೆಪ್ಟೆಂಬರ್ 2016 |
| 2 | ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು, ಹೊಳೆನರಸೀಪುರ | 14 ಅಕ್ಟೋಬರ್ 2016 |
| 3 | ಜವಾಹರಲಾಲ್ ನೆಹರು ನ್ಯಾಷನಲ್ ಇಂಜಿನಿಯರಿಂಗ್ ಕಾಲೇಜು, ಶಿವಮೊಗ್ಗ | 10 ನವೆಂಬರ್ 2016 |
| 4 | ಎಸ್ ಡಿ ಎಂ ಪ್ರಥಮ ದರ್ಜೆ ಕಾಲೇಜು, ಉಜಿರೆ | 12 ಜನವರಿ 2017 |
| 5 | ಜೆ ಎಸ್ ಎಸ್ ಮಹಿಳಾ ಕಾಲೇಜು, ಚಾಮರಾಜನಗರ | 2 ಫೆಬ್ರವರಿ 2017 |
| 6 | ಶ್ರೀ ಗವಿಸಿದ್ದೇಶ್ವರ ಆರ್ಟ್ಸ್, ಸೈನ್ಸ್ & ಕಾಮರ್ಸ್, ಕಾಲೇಜು, ಕೊಪ್ಪಳ | 18 ಫೆಬ್ರವರಿ 2017 |
| 7 | ಶ್ರೀಮತಿ ವಿ. ಜಿ. ಮಹಿಳಾ ಪ್ರಥಮ ದರ್ಜೆ ಕಾಲೇಜು, ಕಲಬುರ್ಗಿ | 28 ಮಾರ್ಚ್ 2017 |






ಚಿತ್ರ 6 & 7: ಎಂ.ಇ.ಎಸ್. ಪ್ರಥಮ ದರ್ಜೆ ಕಾಲೇಜು, ಬೆಂಗಳೂರು ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹೊಳೆನರಸೀಪುರಗಳಲ್ಲಿ ನಡೆದ ಮುಕ್ತ ಉಪನ್ಯಾಸ ಮಾಲೆ ಕಾರ್ಯಕ್ರಮ

6. **ಪ್ರಾಥಮಿಕ ಮತ್ತು ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ವಿಜ್ಞಾನ ವಿಷಯದ ವಿವರಣಾತ್ಮಕ ಕಿರು ಪುಸ್ತಕಗಳ ಪ್ರಕಟಣೆ**

ಶಾಲಾ ಪಠ್ಯಕ್ರಮಕ್ಕೆ ಪೂರಕವಾಗುವಂತೆ 5 ರಿಂದ 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಅನುಕೂಲವಾಗುವ ವಿಜ್ಞಾನ ಮತ್ತು ತಂತ್ರಜ್ಞಾನದ ಇತ್ತೀಚಿನ ಬೆಳವಣಿಗೆಗೆ ಸಂಬಂಧಿಸಿದ ಕಿರು ಪುಸ್ತಕಗಳನ್ನು ಕನ್ನಡದಲ್ಲಿ ಪ್ರಕಟಿಸಲಾಗುವುದು (ಉದಾ: ಉಪಗ್ರಹಗಳು, ಜಾಗತಿಕ ತಾಪಮಾನ ಇತ್ಯಾದಿ). ಈ ಕಾರ್ಯಕ್ರಮದ ಮುಖ್ಯ ಉದ್ದೇಶವು ವಿದ್ಯಾರ್ಥಿಗಳಲ್ಲಿ ವಿಷಯ ಗ್ರಹಿಕೆಯನ್ನು ಹೆಚ್ಚಿಸಲು ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನದ ಕಲಿಕೆಯಲ್ಲಿ ಆಸಕ್ತಿ ಮೂಡಿಸಲು ಅನುವಾಗುವಂತೆ ಆಕರ್ಷಕವಾದ 16 ರಿಂದ 32 ಪುಟಗಳ ವಿವರಣಾತ್ಮಕ ಮತ್ತು ವರ್ಣರಂಜಿತ ಚಿತ್ರಗಳೊಂದಿಗೆ ಸರಳ ಭಾಷೆಯ ವಿವರಣೆಗಳನ್ನೊಳಗೊಂಡ ಕಿರು ಪುಸ್ತಕಗಳನ್ನು ಪ್ರಕಟಿಸುವುದಾಗಿದೆ. ಈ ನಿಟ್ಟಿನಲ್ಲಿ, ಅಕಾಡೆಮಿಯ ಕೋರಿಕೆಯ ಮೇರೆಗೆ ಲೇಖಕರು ಸಲ್ಲಿಸಿರುವ ಬೆಳಕು, ರಸದೂತಗಳು, ಹವಾಮಾನ ವೈಪರೀತ್ಯತೆ & ಸಾಂಕ್ರಾಮಿಕ ರೋಗಗಳು ಎಂಬ ಶೀರ್ಷಿಕೆಗಳ ನಾಲ್ಕು ಕಿರು ಹೊತ್ತಿಗೆಗಳನ್ನು ತಜ್ಞರಿಂದ ಮೌಲ್ಯಮಾಪನ ಮಾಡಿಸಲಾಗಿದ್ದು, ಮುಂದಿನ ಆರ್ಥಿಕ ವರ್ಷದಲ್ಲಿ ಪ್ರಕಟಿಸಲು ಕ್ರಮ ಕೈಗೊಳ್ಳಲಾಗುವುದು.

7. **ವಿದೇಶದಿಂದ ಆಗಮಿಸುವ ವಿಜ್ಞಾನಿಗಳಿಂದ ವಿಶೇಷ ಉಪನ್ಯಾಸ**

ವಿಜ್ಞಾನ ಸ್ನಾತಕೋತ್ತರ ವಿದ್ಯಾರ್ಥಿಗಳು ಮತ್ತು ಉಪನ್ಯಾಸಕರು ವಿದೇಶಿ ಸಂಶೋಧನಾ ಸಂಸ್ಥೆಗಳಲ್ಲಿ ನಡೆಯುತ್ತಿರುವ ಸಂಶೋಧನೆಗಳ ಬಗ್ಗೆ ತಿಳಿದುಕೊಳ್ಳಲು ಅನುವು ಮಾಡಿಕೊಡುವ ನಿಟ್ಟಿನಲ್ಲಿ ವಿದೇಶದಿಂದ ಬೆಂಗಳೂರಿಗೆ ಆಗಮಿಸುವ ವಿಜ್ಞಾನಿಗಳಿಂದ ವಿಶೇಷ ಉಪನ್ಯಾಸವನ್ನು ಏರ್ಪಡಿಸುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ. ಈ ಹಿನ್ನೆಲೆಯಲ್ಲಿ, ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯು ಕರ್ನಾಟಕ ಅಸೋಸಿಯೇಷನ್ ಫಾರ್ ದಿ ಅಡ್ವಾನ್ಸ್‌ಮೆಂಟ್ ಆಫ್ ಸೈನ್ಸ್ ಮತ್ತು ಬೆಂಗಳೂರು ವಿಶ್ವವಿದ್ಯಾಲಯದ ಭೌತ ವಿಜ್ಞಾನ ವಿಭಾಗದೊಂದಿಗೆ ಎರಡು ವಿಶೇಷ ಉಪನ್ಯಾಸಗಳನ್ನು ಅಮೇರಿಕ ಸಂಯುಕ್ತ ಸಂಸ್ಥಾನದ ಫರ್ಮಿ ನ್ಯಾಷನಲ್ ಆಕ್ಸಿಲರೇಟರ್ ಲ್ಯಾಬೊರೇಟರಿಯ ಕೆಳಕಂಡ ಇಬ್ಬರು ಶ್ರೇಷ್ಠ ವಿಜ್ಞಾನಿಗಳಿಂದ ಏರ್ಪಡಿಸಲಾಗಿತ್ತು:

I. ಸಂಪನ್ಮೂಲ ತಜ್ಞರು : ಡಾ. ಚಂದ್ರಶೇಖರ ಎಂ. ಭಟ್
   ಶೀರ್ಷಿಕೆ : "Particle Accelerators at the Energy and Intensity Frontiers"
II. ಸಂಪನ್ಮೂಲ ತಜ್ಞರು : ಡಾ. ಪುಷ್ಪಲತಾ ಸಿ. ಭಟ್
   ಶೀರ್ಷಿಕೆ : "Higgs Boson Discovery and the Future of Particle Physics"

೮. **ಜಿಲ್ಲಾ ಮಟ್ಟದ ವಿಜ್ಞಾನ ಮೇಳ ಕಾರ್ಯಕ್ರಮಗಳ ಆಯೋಜನೆ**

ಪ್ರಚಲಿತ ವೈಜ್ಞಾನಿಕ ವಿದ್ಯಮಾನಗಳ ಬಗ್ಗೆ ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಲು ಹಾಗೂ ವೈಜ್ಞಾನಿಕ ಚಿಂತನೆಯನ್ನು ಬೆಳೆಸಲು ಅನುವಾಗುವಂತೆ ವಿಶೇಷ ಅಭಿವೃದ್ಧಿ ಯೋಜನೆಯಡಿ ಹಿಂದುಳಿದ ತಾಲ್ಲೂಕುಗಳಲ್ಲಿ ಜಿಲ್ಲಾ ಮಟ್ಟದ ವಿಜ್ಞಾನ ಮೇಳವನ್ನು ಆಯೋಜಿಸುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ. ಈ ವಿಜ್ಞಾನ ಮೇಳದಲ್ಲಿ ಎರಡು ವಿಶೇಷ ಉಪನ್ಯಾಸಗಳನ್ನು ಖ್ಯಾತ ವಿಜ್ಞಾನಿಗಳಿಂದ ಏರ್ಪಡಿಸಲಾಯಿತು. ಅಲ್ಲದೆ, ವಿದ್ಯಾರ್ಥಿಗಳಲ್ಲಿ ಸೃಜನಶೀಲತೆಯನ್ನು ಬೆಳೆಸಲು ಮಾದರಿ ತಯಾರಿಕೆ ಮತ್ತು ರಸಪ್ರಶ್ನೆಗಳಂತಹ ಸ್ಪರ್ಧೆಗಳನ್ನು ಆಯೋಜಿಸಲಾಯಿತು.

ಈ ಕೆಳಕಂಡ ಕಾಲೇಜುಗಳ ಸಹಯೋಗದೊಂದಿಗೆ ಪ್ರಸಕ್ತ ಆರ್ಥಿಕ ವರ್ಷದಲ್ಲಿ ಎರಡು ವಿಜ್ಞಾನ ಮೇಳ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಆಯೋಜಿಸಲಾಯಿತು:

| ಕ್ರ.ಸಂ. | ಶೈಕ್ಷಣಿಕ ಸಂಸ್ಥೆ & ಸ್ಥಳ | ದಿನಾಂಕ |
|---|---|---|
| 1 | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹರಿಹರ | 22-24 ಮಾರ್ಚ್ 2017 |
| 2 | ಹೆಚ್.ಪಿ.ಪಿ.ಸಿ. ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಚಳ್ಳಕೆರೆ | 23-24 ಮಾರ್ಚ್ 2017 |



ಚಿತ್ರ 8: ಹರಿಹರದ ಪ್ರಥಮ ದರ್ಜೆ ಕಾಲೇಜಿನಲ್ಲಿ ನಡೆದ ಜಿಲ್ಲಾ ಮಟ್ಟದ ವಿಜ್ಞಾನ ಮೇಳ ಕಾರ್ಯಕ್ರಮವನ್ನು ದಾವಣಗೆರೆಯ ಜಿಲ್ಲಾಧಿಕಾರಿಗಳಾದ ಶ್ರೀ ಡಿ. ಎಸ್. ರಮೇಶ್, ಭಾ.ಆ.ಸೇ. ಇವರು ಉದ್ಘಾಟಿಸುತ್ತಿರುವುದು

## ಸಂಪರ್ಕಿಸಬೇಕಾದ ವಿಳಾಸ:

**ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮತ್ತು ಸದಸ್ಯ ಕಾರ್ಯದರ್ಶಿ**

**ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ**

**'ವಿಜ್ಞಾನ ಭವನ' 24/2, 21ನೇ ಮುಖ್ಯ ರಸ್ತೆ, ಬನಶಂಕರಿ, 2ನೇ ಹಂತ, ಬೆಂಗಳೂರು**

**ಫೋನ್ : 080-26711160/ ಫ್ಯಾಕ್ಸ್ : 080-26712789**

**ಇಮೇಲ್** : ksta.gok@gmail.com